ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 02–11–2015

# ಪತ್ರಿಕಾ ಪ್ರಕಟಣೆ

## ಸೈನಿಕ ವಸತಿ ಶಾಲೆಯ 6 ಮತ್ತು 9ನೇ ತರಗತಿಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 2 (ಕರ್ನಾಟಕ ವಾರ್ತೆ)

ವಿಜಯಪುರದ ಸೈನಿಕ ವಸತಿ ಶಾಲೆಯ 6 ಮತ್ತು 9ನೇ ತರಗತಿಗಳಿಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2016–17 ನೇ ಸಾಲಿನ ಪ್ರವೇಶ ಪರೀಕ್ಷೆಯು ಜನವರಿ 3, 2016 ರಂದು ವಿಜಯಪುರ, ಬೆಳಗಾವಿ, ಬೆಂಗಳೂರು, ಧಾರವಾಡ, ಗುಲ್ಬರ್ಗಾ ನಗರಗಳಲ್ಲಿ ನಡೆಯಲಿದೆ. ಅರ್ಜಿ ನಮೂನೆಗಳನ್ನು ನವೆಂಬರ್ 21, 2015 ರವರೆಗೂ ವಿತರಿಸಲಿದ್ದು ಅರ್ಜಿಗಳನ್ನು ಪ್ರಾಚಾರ್ಯರು, ಸೈನಿಕ ಶಾಲೆ, ವಿಜಯಪುರ ಇವರಿಂದ ಪಡೆದು ಭರ್ತಿಮಾಡಿದ ಅರ್ಜಿಗಳನ್ನು ನವೆಂಬರ್ 30, 2015 ರೊಳಗೆ ಸಲ್ಲಿಸಬಹುದಾಗಿದೆ.

ಅನುಕ್ರಮವಾಗಿ ವಾರ್ಷಿಕ ಶಾಲಾ ಶುಲ್ಕವು ರೂ. 52,345 ಮತ್ತು ರೂ. 23,895 ಆಗಿದ್ದು, ಲಿಖಿತ ಪರೀಕ್ಷೆ, ಸಂದರ್ಶನ ಮತ್ತು ವೈದ್ಯಕೀಯ ಅರ್ಹತೆ ಆಧಾರದ ಮೇಲೆ ಅಭ್ಯರ್ಥಿಗಳನ್ನು ಆಯ್ಕೆಮಾಡಲಾಗುವುದು ಎಂದು ವಿಜಯಪುರದ ಸೈನಿಕ ವಸತಿ ಶಾಲೆಯ ಪ್ರಕಟಣೆ ತಿಳಿಸಿದೆ.

ಹೆಚ್ಚಿನ ಮಾಹಿತಿಗಾಗಿ ವಿಜಯಪುರ ಸೈನಿಕ ಶಾಲೆಯ ದೂರವಾಣಿ ಸಂಖ್ಯೆ 08352 – 270638 ಮೂಲಕ ಸಂಪರ್ಕಿಸಬಹುದಾಗಿದೆ.

ಪಲ್ಲವಿ:ಮಮತ:ಜಿಪಿಆರ್.

## ಅಲ್ಪಸಂಖ್ಯಾತರಿಗೆ ವಿದೇಶದಲ್ಲಿ ಉನ್ನತ ವ್ಯಾಸಂಗಕ್ಕೆ ವಿದ್ಯಾರ್ಥಿ ವೇತನ

ಬೆಂಗಳೂರು, ನವೆಂಬರ್ 2 (ಕರ್ನಾಟಕ ವಾರ್ತೆ)

ಅಲ್ಪಸಂಖ್ಯಾತರ ನಿರ್ದೇಶನಾಲಯವು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದರು, ಸಿಖ್ ಮತ್ತು ಪಾರ್ಸಿ ಸಮುದಾಯಗಳ ಒಟ್ಟು 184 ವಿದ್ಯಾರ್ಥಿಗಳಿಗೆ ವಿದೇಶದಲ್ಲಿ ಉನ್ನತ ವ್ಯಾಸಂಗ ಮಾಡಲು ರೂ. 20 ಲಕ್ಷಗಳ ವಿದ್ಯಾರ್ಥಿ ವೇತನ ಮಂಜೂರು ಮಾಡಿದೆ. ಈ ಬಗ್ಗೆ ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ www.gokdom.kar.nic.in ವಿಳಾಸ ಸಂಪರ್ಕಿಸಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಜಿಪಿಆರ್.

# ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆ ಜಾರಿ

ಬೆಂಗಳೂರು, ನವೆಂಬರ್ 2, (ಕರ್ನಾಟಕ ವಾರ್ತೆ)

ಅಲ್ಪಸಂಖ್ಯಾತರ ನಿರ್ದೇಶನಾಲಯವು ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದರು, ಸಿಖ್ ಮತ್ತು ಪಾರ್ಸಿ ಸಮುದಾಯಗಳ ವಿದ್ಯಾರ್ಥಿಗಳಿಂದ ವಿದ್ಯಾಸಿರಿ ಯೋಜನೆಯಡಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನವಾಗಿದೆ. ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್ **www.gokdom.kar.nic.in** ವಿಳಾಸ ಸಂಪರ್ಕಿಸಲು ಅಲ್ಪಸಂಖ್ಯಾತರ ನಿರ್ದೇಶನಾಲಯದ ಪ್ರಕಟಣೆ ತಿಳಿಸಿದೆ.

ಪಲ್ಲವಿ:ಜಿಪಿಆರ್.

# ಪ್ಲಾಸ್ಟಿಕ್‌ನಿಂದ ತಯಾರಿಸಲ್ಪಟ್ಟ ರಾಷ್ಟ್ರಧ್ವಜ ಬಳಕೆ ನಿಷೇಧ

ಬೆಂಗಳೂರು, ನವೆಂಬರ್ 2 (ಕರ್ನಾಟಕ ವಾರ್ತೆ)

ಭಾರತದ ಧ್ವಜ ಸಂಹಿತೆ, 2002 ರ ಅನ್ವಯ ಕೈಯಿಂದ ನೂಲುವ ಮತ್ತು ನೇಯುವ ಉಣ್ಣೆ/ಹತ್ತಿ/ರೇಷ್ಮೆ ಖಾದಿಯಿಂದ ತಯಾರಿಸಲ್ಪಟ್ಟ ರಾಷ್ಟ್ರಧ್ವಜವನ್ನು ಮಾತ್ರ ಸಾರ್ವಜನಿಕರು ಬಳಸಲು ಅವಕಾಶವಿರುತ್ತದೆ.

ಆದರೆ, ಪ್ರಮುಖ ರಾಷ್ಟ್ರೀಯ ಸಾಂಸ್ಕೃತಿಕ ಹಾಗೂ ಕ್ರೀಡಾ ಕಾರ್ಯಕ್ರಮಗಳಲ್ಲಿ ಪ್ಲಾಸ್ಟಿಕ್‌ನಿಂದ ತಯಾರಿಸಲ್ಪಟ್ಟ ರಾಷ್ಟ್ರಧ್ವಜವನ್ನು ಬಳಸುತ್ತಿರುವುದು ಹಾಗೂ ಕಾರ್ಯಕ್ರಮ ಮುಗಿದ ನಂತರ ಅವುಗಳನ್ನು ಸರಿಯಾಗಿ ವಿಲೇಮಾಡದೆ ಎಲ್ಲೆಂದರಲ್ಲಿ ಬಿಸಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಪ್ಲಾಸ್ಟಿಕ್‌ನಿಂದ ತಯಾರಿಸಲ್ಪಟ್ಟ ಧ್ವಜವು ಜೈವಿಕ ವಿಘಟನೆಗೆ ಒಳಗಾಗದೆ ದೀರ್ಘಕಾಲ ಹಾಗೆಯೇ ಉಳಿಯುವುದರಿಂದ ಮತ್ತು ಪರಿಸರಕ್ಕೆ ಹಾನಿಕರವೂ ಆಗಿರುವುದರಿಂದ ಹಾಗೂ ರಾಷ್ಟ್ರಧ್ವಜದ ಗೌರವ ಕಾಪಾಡುವ ದೃಷ್ಟಿಯಿಂದ ರಾಷ್ಟ್ರಧ್ವಜ ಸಂಹಿತಿಯನ್ವಯ ಕೇಂದ್ರ ಸರ್ಕಾರದ ಸೂಚನೆಯಂತೆ ಪ್ಲಾಸ್ಟಿಕ್‌ನಿಂದ ತಯಾರಿಸಿದ ರಾಷ್ಟ್ರಧ್ವಜಗಳನ್ನು ಬಳಸದಂತೆ ನಿರ್ಭಂಧಿಸಿ, ಅದರ ತಯಾರಿಸುವುವಿಕೆ ಅಥವಾ ದಾಸ್ತಾನಿಡುವಿಕೆ ಅಥವಾ ಮಾರಾಟ ಮಾಡುವ ಅಥವಾ ವಿತರಣೆಗಳು ಆಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಎಲ್ಲಾ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ನಿರ್ವಹಣಾಧಿಕಾರಿಗಳು, ನಗರ ಪಾಲಿಕೆ ಆಯುಕ್ತರು ಸೇರಿದಂತೆ ಪೊಲೀಸ್ ಆಯುಕ್ತರು ಹಾಗೂ ಎಲ್ಲಾ ಜಿಲ್ಲೆಗಳ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ರಾಜ್ಯ ಸರ್ಕಾರ ಸೂಚಿಸಿದೆ.

ಪಲ್ಲವಿ:ಜಿಪಿಆರ್.

# ಬೆಂಗಳೂರು – ಮೈಸೂರು ನಡುವೆ ಆರು ಪಥದ ಕಾಂಕ್ರೀಟ್ ರಸ್ತೆ ನಿರ್ಮಾಣ – ಹೆಚ್. ಸಿ. ಮಹಾದೇವಪ್ಪ

ಬೆಂಗಳೂರು, ನವೆಂಬರ್ 2 (ಕರ್ನಾಟಕ ವಾರ್ತೆ)

ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಹೆದ್ದಾರಿಗಳಲ್ಲಿ ಲೋಕೋಪಯೋಗಿ ಇಲಾಖೆಯಡಿ ಬರುವ ರಸ್ತೆಗಳಲ್ಲಿನ ಗುಂಡಿ ಮುಚ್ಚಲು 500 ಕೋಟಿ ರು. ಬಿಡುಗಡೆ ಮಾಡಲಾಗಿದ್ದು, ಸಂಪೂರ್ಣವಾಗಿ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ಲೋಕೋಪಯೋಗಿ ಸಚಿವ ಹೆಚ್. ಮಹಾದೇವಪ್ಪ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಇಂದು ಮಾತನಾಡಿದ ಸಚಿವರು ಬೆಂಗಳೂರು – ಮೈಸೂರು ರಸ್ತೆ ಕೆಲವು ಕಡೆ ಹಾಳಾಗಿದೆ ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಮಹಾದೇವಪ್ಪ ಅವರು ಬೆಂಗಳೂರು – ಮೈಸೂರು ರಸ್ತೆಯನ್ನು ಆರು ಪಥದ ಕಾಂಕ್ರೀಟ್ ರಸ್ತೆ ನಿರ್ಮಾಣ ಮಾಡಲು ಕ್ರಮ ಕೈಗೊಂಡಿದ್ದು ಈ ಸಂಬಂಧ ಕೇಂದ್ರ ಸರ್ಕಾರಕ್ಕೆ ಪ್ರಸ್ತಾಪ ಸಲ್ಲಿಸಲಾಗಿದೆ ಎಂದರು.

ಬೆಂಗಳೂರು – ಕನಕಪುರದ ರಸ್ತೆಯನ್ನು ನಾಲ್ಕು ಪಥದ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ಎಂದ ಸಚಿವರು ಕನಕಪುರದಿಂದ ಸತ್ಯಮಂಗಲದವರೆಗಿನ ರಸ್ತೆಯನ್ನು ಎರಡು ಪಥದ ರಸ್ತೆಯನ್ನಾಗಿ ಮಾಡಲಾಗುವುದು, ಈಗಾಗಲೇ ಈ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ ಎಂದರು.

ರಾಜ್ಯದಲ್ಲಿ ಸುಮಾರು 9 ಸಾವಿರ ರಸ್ತೆ ಹಂಪ್‌ಗಳಿವೆ ಅದರಲ್ಲಿ ಸುಮಾರು 7,500 ಹಂಪ್‌ಗಳನ್ನು ತೆಗೆಯಲಾಗಿದೆ ಎಂದ ಮಹಾದೇವಪ್ಪ ಅವರು 2,000 ಕಿಮೀ ರಾಜ್ಯ ಹೆದ್ದಾರಿಗಳನ್ನು ರಾಷ್ಟ್ರೀಯ ಹೆದ್ದಾರಿಗಳನ್ನಾಗಿ ಪರಿವರ್ತಿಸಲು ಕೇಂದ್ರ ಸರ್ಕಾರಕ್ಕೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದರು.

ಜಿಲ್ಲಾ ಹೆದ್ದಾರಿಗಳನ್ನು ರಾಜ್ಯ ಹೆದ್ದಾರಿಗಳನ್ನಾಗಿ ಪರಿವರ್ತಿಸುವ ಕಾರ್ಯವು ನಡೆದಿದ್ದು, ಈವರೆಗೆ 6 ಸಾವಿರ ಕಿ.ಮೀ ರಸ್ತೆಯನ್ನು ರಾಜ್ಯ ಹೆದ್ದಾರಿಗಳನ್ನಾಗಿ ಪರಿವರ್ತನೆ ಮಾಡಲಾಗಿದೆ ಎಂದ ಸಚಿವರು ರಸ್ತೆ ನಿರ್ಮಾಣ ಹಾಗೂ ರಸ್ತೆ ನಿರ್ವಹಣೆ ಸಂಚರಿಸದಂತೆ ರಾಜ್ಯಕ್ಕೆ ಈವರೆಗೆ ಎರಡು ರಾಷ್ಟ್ರೀಯ ಪ್ರಶಸ್ತಿಗಳು ಬಂದಿವೆ ಎಂದರು.

ನಗರದ ಆನಂದ ರಾವ್ ವೃತ್ತದ ಬಳಿ ಸುಮಾರು 7 ಎಕರೆ ಜಾಗ ಲಭ್ಯವಿದ್ದು, ಅಲ್ಲಿ ಸರ್ಕಾರದ ಎಲ್ಲಾ ಕಚೇರಿಗಳು ಒಂದೇ ಕಡೆ ಕೆಲಸ ನಿರ್ವಹಿಸುವಂತೆ ಬಹುಮಹಡಿ ಕಟ್ಟಡ ನಿರ್ಮಿಸಲು ಸರ್ಕಾರ ಚಿಂತನೆ ನಡೆಸಿದೆ ಎಂದ ಹೆಚ್. ಸಿ. ಮಹಾದೇವಪ್ಪ ಅವರು ನೈಸ್‌ರಸ್ತೆ ಖಳಪೆ ಗುಣಮಟ್ಟದಿಂದ ಕೂಡಿದೆ ಹಾಗೂ ಹೆಚ್ಚಿನ ಟೋಲ್ ಸಂಗ್ರಹಮಾಡುತ್ತಿದೆ ಎಂಬ ಪತ್ರಕರ್ತರ ಪ್ರಶ್ನೆಗೆ ಈ ಕುರಿತು ಮಾಹಿತಿ ಪಡೆದು ಕ್ರಮಕೈಗೊಳ್ಳಲಾಗುವುದು ಎಂದರು.

ಪಲ್ಲವಿ:ಕೆಪಿಪಿ:ಜಿಪಿಆರ್.

# ಬೆಂಗಳೂರು ನಗರದ ಅಭಿವೃದ್ಧಿಗೆ ಕ್ರಮ – ಕೆ.ಜೆ. ಜಾರ್ಜ್

ಬೆಂಗಳೂರು, ನವೆಂಬರ್ 2 (ಕರ್ನಾಟಕ ವಾರ್ತೆ)

ಬೆಂಗಳೂರು ನಗರದ ಸರ್ವತೋಮುಖ ಅಭಿವೃದ್ಧಿಗೆ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುವುದು ಎಂದು ಬೆಂಗಳೂರು ನಗರ ಅಭಿವೃದ್ಧಿ ಸಚಿವ ಕೆ. ಜೆ. ಜಾರ್ಜ್ ಅವರು ತಿಳಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಇಂದು ಭೇಟಿಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ನಾನು ಗೃಹ ಸಚಿವರಾಗಿದ್ದ ವೇಳೆ ರಾಜ್ಯದಲ್ಲಿ ದೊಡ್ಡ ಮಟ್ಟದ ದೊಂಬಿಗಳು, ಘಟನೆಗಳು ಆಗಿಲ್ಲ ಎರಡೂವರೆ ವರ್ಷಗಳ ಅವಧಿಯಲ್ಲಿ ಉತ್ತಮವಾಗಿ ಕರ್ತವ್ಯ ನಿರ್ವಹಿಸಿದ್ದೇನೆ ಎಂದರು.

ನನಗೆ ಈಗ ದೊರೆತ್ತಿರುವ ಹೊಸ ಖಾತೆಯನ್ನು ಸಮರ್ಪಕವಾಗಿ ನಿಭಾಯಿಸುತ್ತೇನೆ ಎಂದ ಕೆ. ಜೆ. ಜಾರ್ಜ್ ಅವರು ಬೆಂಗಳೂರು ಅಭಿವೃದ್ಧಿ ನನ್ನೊಬ್ಬನಿಂದಲೇ ಆಗಲ್ಲ. ಮುಖ್ಯಮಂತ್ರಿಗಳ ಸಹಕಾರ ಹಾಗೂ ಸಚಿವರ ಸಹಕಾರವು ಬೇಕು. ಈಗಷ್ಟೇ ಖಾತೆ ವಹಿಸಿಕೊಂಡಿದ್ದೇನೆ. ಬೆಂಗಳೂರಿನ ಸಮಸ್ಯೆಗಳ ಬಗ್ಗೆ ಅಧ್ಯಯನ ಮಾಡಿ ಪರಿಹಾರಕ್ಕೆ ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ ಎಂದರು.

ಕಸದ ಸಮಸ್ಯೆ ಬೆಂಗಳೂರಿನಲ್ಲಿ ಹೆಚ್ಚಾಗಿದೆ. ಅವೈಜ್ಞಾನಿಕ ಕಸ ವಿಲೇವಾಗಿ ಮಾಡಿದ್ದೇ ಇದಕ್ಕೆ ಕಾರಣ ಎಂದ ಕೆ.ಜೆ. ಜಾರ್ಜ್ ಅವರು ಈಗ ನಮ್ಮ ಸರ್ಕಾರ ವೈಜ್ಞಾನಿಕ ರೀತಿಯಲ್ಲಿ ಕಸವಿಲೇವಾರಿಗೆ ಹಾಗೂ ಸಂಸ್ಕರಣೆಗೆ ಮುಂದಾಗಿದೆ ಎಂದರು.

ಇಂದು ಬೆಂಗಳೂರು ಬೃಹತ್ ಪ್ರಮಾಣದಲ್ಲಿ ಬೆಳೆಯುತ್ತಿದ್ದು ಸಮಸ್ಯೆಗಳು ಹೆಚ್ಚಾಗುತ್ತಿವೆ ಎಂದ ಸಚಿವರು ಈಗಾಗಲೇ 7 ತ್ಯಾಜ್ಯ ಸಂಸ್ಕರಣಾ ಘಟಕಗಳನ್ನು ನಿರ್ಮಾಣ ಮಾಡಲಾಗಿದ್ದು ಒಂದು ಘಟಕ ಕಾರ್ಯ ಆರಂಭಿಸಿದೆ ಎಂದರು ಸಚಿವರು ತಿಳಿಸಿದರು.

ಪಲ್ಲವಿ:ಕೆಪಿಪಿ:ಜಿಪಿಆರ್.